847

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ 2022-23ನೇ ಸಾಲಿನಲ್ಲಿ ರೈತರ ಜಮೀನುಗಳಿಗೆ ಹೋಗುವ ರಸ್ತೆಗಳನ್ನು ಅಭಿವೃದ್ಧಿಪಡಿಸುವ ಕುರಿತು.

**ಓದಲಾಗಿದೆ:** ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/472/ಉಖಾಯೋ/2013 ಬೆಂಗಳೂರು, ದಿನಾಂಕ:13-08-2013.

*****

**ಪ್ರಸ್ತಾವನೆ:**

ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ ರವರು 2022-23ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ರೈತರ ಜಮೀನುಗಳಿಗೆ ಹೋಗುವ ರಸ್ತೆಗಳನ್ನು ಆದ್ಯತೆಯ ಮೇರೆಗೆ ಅಭಿವೃದ್ಧಿಪಡಿಸುವುದಾಗಿ ಘೋಷಿಸಿರುತ್ತಾರೆ.

ರೈತರು ತಾವು ಬೆಳೆದ ಕೃಷಿ ಉತ್ಪನ್ನಗಳನ್ನು ಸಕಾಲದಲ್ಲಿ ಮಾರುಕಟ್ಟೆಗಳಿಗೆ ಸಾಗಿಸಲು ಅನುಕೂಲವಾಗುವಂತೆ ರೈತರ ಜಮೀನುಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳನ್ನು ಸರ್ವಋತು ರಸ್ತೆಗಳಾಗಿ ಅಭಿವೃದ್ಧಿಪಡಿಸುವುದು ಅತ್ಯಗತ್ಯವಾಗಿರುತ್ತದೆ.

ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ರೈತರ ಜಮೀನುಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳನ್ನು ಒಟ್ಟು ಕಾರ್ಮಿಕ ಆಯವ್ಯಯದ ಶೇ.25ರ ಮಿತಿಯಲ್ಲಿ ಅನುಷ್ಠಾನಗೊಳಿಸಲು ಆದೇಶಿಸಲಾಗಿತ್ತು.

ಪ್ರಸ್ತುತ ಆಯವ್ಯಯ ಘೋಷಣೆಯನ್ನು ಅನುಷ್ಠಾನಗೊಳಿಸುವ ಉದ್ದೇಶದಿಂದ ಮೇಲೆ ಓದಲಾದ ಸರ್ಕಾರದ ಆದೇಶವನ್ನು ಮರು ಜಾರಿಗೊಳಿಸಲು ಸರ್ಕಾರವು ತೀರ್ಮಾನಿಸಿರುತ್ತದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: RDC-EGS/273/2022 (E-742163), ಬೆಂಗಳೂರು ದಿನಾಂಕ:08-04-2022**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನಲೆಯಲ್ಲಿ 2022-23ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ, ಒಟ್ಟು ಕಾರ್ಮಿಕ ಆಯವ್ಯಯದ ಶೇ.25ರ ಮಿತಿಗೊಳಪಟ್ಟು ರೈತರ ಜಮೀನುಗಳಿಗೆ ಹೋಗುವ ರಸ್ತೆಗಳನ್ನು ಸರ್ವಋತು ಸಂಪರ್ಕ ರಸ್ತೆಗಳಾಗಿ ಅಭಿವೃದ್ಧಿಪಡಿಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಆದೇಶಿಸಿದೆ.

1) ಈ ಆದೇಶವು 2022-23ನೇ ಆರ್ಥಿಕ ವರ್ಷಕ್ಕೆ ಮಾತ್ರ ಅನ್ವಯಿಸುತ್ತದೆ.
2) ಕಂದಾಯ ಇಲಾಖೆಯು ಸರ್ವೆ ಮಾಡಿರುವ, ಗ್ರಾಮ ನಕಾಶೆ ದಾಖಲೆಯಲ್ಲಿ ಇರುವ ಅಧಿಕೃತ ರಸ್ತೆಗಳನ್ನು ಮಾತ್ರ ಅಭಿವೃದ್ಧಿಪಡಿಸಲು ಕೈಗೆತ್ತಿಕೊಳ್ಳುವುದು.
3) ನಕಾಶೆಯಲ್ಲಿ ದಾರಿಯಿಲ್ಲದಿದ್ದರೂ ಗ್ರಾಮಸ್ಥರು ವಾಡಿಕೆಯಲ್ಲಿ ದಾರಿ ಉಪಯೋಗಿಸುತ್ತಿದ್ದರೆ ಹಾಗೂ ರಸ್ತೆಯನ್ನು ಖಾಸಗಿ ಜಾಗದಲ್ಲಿ ಅಭಿವೃದ್ಧಿಪಡಿಸುವ ಅಗತ್ಯವಿದ್ದಲ್ಲಿ ಸಂಬಂಧಪಟ್ಟ ಭೂಮಾಲೀಕರಿಂದ ದಾನ ಪತ್ರವನ್ನು ಗ್ರಾಮ ಪಂಚಾಯತಿ ಹೆಸರಿಗೆ ಉಪ ನೋಂದಣಾಧಿಕಾರಿ ಕಛೇರಿಯಲ್ಲಿ ನೋಂದಣಿ ಮಾಡಿಕೊಳ್ಳುವುದು.
4) ಸರ್ವಋತು ಸಂಪರ್ಕ ರಸ್ತೆಗಳನ್ನು ಅಭಿವೃದ್ಧಿಪಡಿಸುವ ಮಾರ್ಗದಲ್ಲಿ ಅಗತ್ಯವಿರುವ ಸೇತುವೆಗಳು, Culvert Drains ಇತ್ಯಾದಿಗಳನ್ನು ಸಹ ನಿರ್ಮಿಸುವುದು.
5) ರೈತರ ಜಮೀನುಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಒಂದು ವೇಳೆ ಭೂಸ್ವಾಧೀನ ಪಡಿಸಿಕೊಳ್ಳಬೇಕಿದ್ದಲ್ಲಿ ಭೂಸ್ವಾಧೀನ ಪರಿಹಾರಕ್ಕಾಗಿ ನರೇಗಾ ಯೋಜನೆಯ ಅನುದಾನವನ್ನು ಬಳಸತಕ್ಕದ್ದಲ್ಲ.



Scanned with CamScanner

6) ಸದರಿ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಜಿಲ್ಲೆ/ತಾಲ್ಲೂಕು/ಗ್ರಾಮ ಪಂಚಾಯತಿ ಮಟ್ಟದಲ್ಲಿ ಇತರ ಯಾವುದೇ ಯೋಜನೆ/ಅನುದಾನಗಳು ಲಭ್ಯವಿದ್ದಲ್ಲಿ ಒಗ್ಗೂಡಿಸುವಿಕೆ ಮೂಲಕ ಅನುಷ್ಠಾನಗೊಳಿಸುವುದು.

7) ರಸ್ತೆ ಕಾಮಗಾರಿಗಳನ್ನು ನೋಂದಾಯಿತ ಜಾಬ್‌ಕಾರ್ಡ್ ಹೊಂದಿರುವ ಕೂಲಿಕಾರರಿಂದ ಮಾತ್ರ ನಿರ್ವಹಿಸತಕ್ಕದ್ದು ಮತ್ತು ಯೋಜನೆಯಡಿ ಅನುಮತಿಸಲ್ಪಟ್ಟ ಯಂತ್ರಗಳನ್ನು ಹೊರತುಪಡಿಸಿ ಇತರ ಯಾವುದೇ ಯಂತ್ರಗಳನ್ನು ಬಳಸತಕ್ಕದ್ದಲ್ಲ.

8) ರಸ್ತೆ ಕಾಮಗಾರಿಗಳು ಕಡ್ಡಾಯವಾಗಿ ಗ್ರಾಮ ಸಭೆಯಲ್ಲಿ ಅನುಮೋದನೆಯಾಗಿರಬೇಕು.

9) ಗ್ರಾಮ ಪಂಚಾಯತಿಗಳು ಈಗಾಗಲೇ 2022-23ನೇ ಸಾಲಿನ ನರೇಗಾ ಯೋಜನೆಯ ಕ್ರಿಯಾಯೋಜನೆಯಲ್ಲಿ ಒಟ್ಟು ಕಾರ್ಮಿಕ ಆಯವ್ಯಯದ ಶೇ.10ರಷ್ಟನ್ನು ಮೀರದಂತೆ ರಸ್ತೆ ಕಾಮಗಾರಿಗಳನ್ನು ಅಳವಡಿಸಿಕೊಂಡು ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆದಿರುತ್ತಾರೆ. ಪ್ರಸ್ತುತ ಗ್ರಾಮ ಪಂಚಾಯತಿಯ ಒಟ್ಟು ಕಾರ್ಮಿಕ ಆಯವ್ಯಯದ ಶೇ.25ರ ಮಿತಿಯೊಳಗೆ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಅವಕಾಶ ಕಲ್ಪಿಸಿರುವುದರಿಂದ, ಗ್ರಾಮ ಪಂಚಾಯತಿಗಳು ಈಗಾಗಲೇ ಕ್ರಿಯಾಯೋಜನೆಯಲ್ಲಿ ಶೇ.10ರ ಮಿತಿಗೊಳಪಟ್ಟು ಅಳವಡಿಸಿಕೊಂಡಿರುವ ರಸ್ತೆ ಕಾಮಗಾರಿಗಳ ಜೊತೆಗೆ, ಕಾರ್ಮಿಕ ಆಯವ್ಯಯದ ಶೇ.15ರಷ್ಟು ಮೊತ್ತಕ್ಕೆ ರೈತರ ಜಮೀನುಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳನ್ನು ಮಾತ್ರ ಹೆಚ್ಚುವರಿ ಕ್ರಿಯಾಯೋಜನೆಯಲ್ಲಿ ಅಳವಡಿಸಿಕೊಂಡು ಅನುಮೋದನೆಗೆ ಸಲ್ಲಿಸತಕ್ಕದ್ದು ಮತ್ತು ಜಿಲ್ಲಾ ಪಂಚಾಯತಿಯು ಹೆಚ್ಚುವರಿ ಕ್ರಿಯಾಯೋಜನೆಗಳನ್ನು ತಕ್ಷಣವೇ ಅನುಮೋದಿಸತಕ್ಕದ್ದು.

10) ರಸ್ತೆ ಕಾಮಗಾರಿಗಳನ್ನು ಅನುಷ್ಠಾನಗೊಳಿಸುವಲ್ಲಿ ಯೋಜನೆಯ ಇತರ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ,

(ಕೆ.ನದೀಮ್ ಅಹ್ಮದ್)
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಪ್ರತಿಯನ್ನು:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಆಯುಕ್ತರು, ಗ್ರಾಮೀಣಾಭಿವೃದ್ಧಿ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
4. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
5. ನಿರ್ದೇಶಕರು, ಸಾಮಾಜಿಕ ಪರಿಶೋಧನಾ ನಿರ್ದೇಶನಾಲಯ, ಶೇಷಾದ್ರಿಪುರಂ, ಬೆಂಗಳೂರು.
6. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
7. ಮುಖ್ಯ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
8. ಜಂಟಿ ನಿರ್ದೇಶಕರು(ಆಡಳಿತ/ತಾಂತ್ರಿಕ/ತೋಟಗಾರಿಕೆ), ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
9. ಸಹಾಯಕ ನಿರ್ದೇಶಕರು (ಆಡಳಿತ/ತಾಂತ್ರಿಕ/ಎಂಐಎಸ್/ಒಗ್ಗೂಡಿಸುವಿಕೆ), ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
10. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
11. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
12. ಕಛೇರಿ ಪ್ರತಿ.